ಊ) ಚಾಮರಾಜನಗರ ಜಿಲ್ಲೆಗೆ ಬೆಳೆ ವಿಮೆಗೆ ಬಿಡುಗಡೆಯಾದ ಅನುದಾನವೆಷ್ಟು ?

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು)

ಅ) 2006–07ನೇ ಮುಂಗಾರು ಹಂಗಾಮಿನಲ್ಲಿ 15 83 ಲಕ್ಷ ಹೆಕ್ಟೇರ್ ಪ್ರದೇಶವನ್ನು ಬೆಳೆ ವಿಮೆಗೆ ಒಳಪಡಿಸಲಾಗಿದೆ

ಆ) ಸದರಿ ಹಂಗಾಮಿನಲ್ಲಿ ಬೆಳೆ ವಿಮೆ ಯೋಜನೆಯಲ್ಲಿ 7 88 ಲಕ್ಷ ರೈತರು ಪಾಲ್ಗೊಂಡಿರುತ್ತಾರೆ

ಇ) ವಿಮಾ ಸಂಸ್ಥೆಯು 2006–07ನೇ ಸಾಲಿನಲ್ಲಿ ಬೆಳೆ ವಿಮಾ ನಷ್ಟ ಪರಿಹಾರ ಲೆಕ್ಕ ಹಾಕಿದ ನಂತರ ಮಾತ್ರ ರಾಜ್ಯ ಸರ್ಕಾರದ ವತಿಯಿಂದ ಬಿಡುಗಡೆ ಮಾಡಬೇಕಾದ ವಿವರಗಳು ಲಭ್ಯವಾಗಲಿದೆ

ಈ) ಚಾಮರಾಜನಗರ ಜಿಲ್ಲೆಯಲ್ಲಿ 2006–07ರ ಮುಂಗಾರು ಹಂಗಾಮಿನಲ್ಲಿ 21,918 ಹೆಕ್ಟೇರ್ ಪ್ರದೇಶವನ್ನು ಬೆಳೆ ವಿಮೆಗೆ ಒಳಪಡಿಸಲಾಗಿದೆ

ಉ) ಈ ಹಂಗಾಮಿನಲ್ಲಿ ಒಟ್ಟು 19,619 ರೈತರು ಈ ಯೋಜನೆಯಲ್ಲಿ ಪಾಲ್ಗೊಂಡಿರುತ್ತಾರೆ

ಊ) ಬೆಳೆ ನಷ್ಟ ಪರಿಹಾರ ಲೆಕ್ಕ ಹಾಕಿದ ನಂತರ ಬಿಡುಗಡೆ ಮಾಡಬೇಕಾದ ಅನುದಾನದ ವಿವರಗಳು ಲಭ್ಯವಾಗಲಿದೆ

670 (414) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) – ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತಸಂಪರ್ಕ ಕೇಂದ್ರಗಳಿಗೆ ಆನ್‌ಲೈನ್ ಸೌಲಭ್ಯ ಒದಗಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ,

ಆ) ರೈತಸಂಪರ್ಕ ಕೇಂದ್ರಗಳಿಗೆ ಏಕ ಗವಾಕ್ಷಿ ಯೋಜನೆ ಜಾರಿಗೊಳಿಸುವ ಯೋಚನೆ ಸರ್ಕಾರಕ್ಕಿದೆಯೇ(Sıngle Wındow System) ,

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು) –

ಅ) ಎಲ್ಲಾ ರೈತಸಂಪರ್ಕ ಕೇಂದ್ರಗಳಿಗೆ ಇಂಟರ್‌ನೆಟ್ ಸೌಲಭ್ಯ ಪಡೆಯಲು ಮಂಜೂರಾತಿ ನೀಡಲಾಗಿದೆ

ಆ) ಇಲ್ಲ

ಇ) ಉದ್ಭವಿಸುವುದಿಲ್ಲ